ಮೇಲೆ ಸಮಗ್ರವಾದ ಚಿತ್ರಣ ಸಿಕ್ಕಮೇಲೆ, ಜಿಲ್ಲಾಧಿಕಾರಿಗಳಿಂದ ವರದಿ ಬಂದಮೇಲೆ, ಕೇಂದ್ರ ಸರ್ಕಾರದ ಬಳಿಗೆ ಒಂದು ನಿಯೋಗ ಆಗಸ್ಟ್ ಮೊದಲನೇ ವಾರದಲ್ಲಿ ಹೋಗಿ, ಹಿಂದಿನ ಪರಿಸ್ಥಿತಿಗಳ ಬಗ್ಗೆ ಮತ್ತು ನಾವು ಕೊಟ್ಟಂಥ ಮನವಿ, ಈಗಿನ ಪರಿಸ್ಥಿತಿಗಳ ಬಗ್ಗೆ ಮತ್ತು ನಮ್ಮ ರಾಜ್ಯ ಸರ್ಕಾರದಿಂದ ಏನು ಮಾಡಿದ್ದೇವೆ, ಏನು ಮಾಡುತ್ತಿದ್ದೇವೆ, ಹೇಗೆ ಹೆಚ್ಚುವರಿ ಅನುಕೂಲಗಳು ಬೇಕೆಂಬುದನ್ನು ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಿ ಹೆಚ್ಚುವರಿ ಹಣವನ್ನು ತರುವಂಥ ಪ್ರಯತ್ನವನ್ನು ಮಾಡುತ್ತೇವೆ. ನಾವು ಅಲ್ಲಿಯವರೆಗೆ ಕಾಯದೇ ಇನ್ನೂ ಹೆಚ್ಚುವರಿ ಹಣವನ್ನು ಬಿಡುಗಡೆ ಮಾಡಿ ಈ ಸಮಸ್ಯೆಗೆ ಸ್ಪಂದಿಸುವಂಥ ಪ್ರಾಮಾಣಿಕ ಪ್ರಯತ್ನವನ್ನು ನಮ್ಮ ಸರ್ಕಾರ ಮಾಡುತ್ತದೆಂಬ ಭರವಸೆಯನ್ನು ಕೊಡುತ್ತೇನೆ. ಆ ಭಾಗದಲ್ಲಿರುವ ಎಲ್ಲಾ ಸದಸ್ಯರಿಗೂ ಹೇಳುತ್ತೇನೆ; ಆ ಜಿಲ್ಲೆ, ಈ ಜಿಲ್ಲೆಯೆಂದು ಅಲ್ಲ. ಈಗ ಶೂನ್ಯವೇಳೆಯಲ್ಲಿ ಒಂದು ಜಿಲ್ಲೆಯ ಬಗ್ಗೆ ಪ್ರಸ್ತಾಪ ಮಾಡಿದ್ದಾರೆ. ಆದರೆ ಕೊಡಗು ಜಿಲ್ಲೆಯ ಬಗ್ಗೆ ವಿಶೇಷವಾದ ಮುತುವರ್ಜಿಯನ್ನು ವಹಿಸಬೇಕಾಗಿದೆ. ಅದರಲ್ಲಿ ಎರಡು ಮಾತಿಲ್ಲ. ಎಲ್ಲಾ ಕಡೆಗಳಲ್ಲೂ ವಿಶೇಷ ಗಮನವನ್ನು ಕೊಟ್ಟು ಇನ್ನೂ ಹೆಚ್ಚುವರಿ ಹಣವನ್ನು ಬಿಡುಗಡೆ ಮಾಡಿ, ತತ್‌ಕ್ಷಣ ಆಗಬೇಕಾದ ಕೆಲಸ ಕಾರ್ಯಗಳಿಗೆ ನಾನು ಸ್ಪಂದಿಸುತ್ತೇನೆ.

ಉಪಾಧ್ಯಕ್ಷರು : ಈಗ ಮಾನ್ಯ ವಿರೋಧ ಪಕ್ಷದ ನಾಯಕರೆ, ಮಾತನಾಡಿ.

ಶ್ರೀ ಹೆಚ್.ಡಿ.ರೇವಣ್ಣ : ಹಾಸನ ಜಿಲ್ಲೆಗೆ ಒಂದು ಪೈಸೆ ಹಣ ಬಿಡುಗಡೆ ಮಾಡಿಲ್ಲ. ನಾವು ಇದನ್ನು ಪ್ರತಿಭಟಿಸಿ ಧರಣಿ ಮಾಡುತ್ತೇವೆ.

(ಗೊಂದಲ)

ಉಪಾಧ್ಯಕ್ಷರು : ಮಾನ್ಯ ರೇವಣ್ಣನವರೆ, ಇದು ಶೂನ್ಯವೇಳೆ, ಸಾಕಷ್ಟು ಚರ್ಚೆಯನ್ನು ಮಾಡಿದ್ದೇವೆ. ಮಾನ್ಯ ಮುಖ್ಯಮಂತ್ರಿಯವರು ಬಹಳ ಸ್ಪಷ್ಟವಾದ ಉತ್ತರವನ್ನು ಕೊಟ್ಟಿದ್ದಾರೆ. ಮಾನ್ಯ ವಿರೋಧ ಪಕ್ಷದ ನಾಯಕರೆ, ತಾವು ವಿಷಯ ಪ್ರಸ್ತಾಪ ಮಾಡಿ.

(ಈ ಹಂತದಲ್ಲಿ ಜೆಡಿಎಸ್ ಸದಸ್ಯರು ಧರಣಿ ನಡೆಸಲು ಮುಂದಾದರು)

ಶ್ರೀ ಸಿದ್ದರಾಮಯ್ಯ : ಮಾನ್ಯ ರೇವಣ್ಣನವರೆ, ತಾವು ವಿಷಯವನ್ನು ಹೇಳಿದ ಮೇಲೆ ಧರಣಿಗೆ ಬರುವಿರಂತೆ ತಮ್ಮ ಸ್ಥಳಕ್ಕೆ ಬನ್ನಿ. ನೀವು ಮಾತನಾಡುವ ಅವಕಾಶವನ್ನು ಏಕೆ ಕಳೆದುಕೊಳ್ಳುತ್ತೀರಿ, ಬನ್ನಿ.

(ಮಾನ್ಯ ಹೆಚ್.ಡಿ.ರೇವಣ್ಣನವರು ತಮ್ಮ ಸ್ಥಳಕ್ಕೆ ವಾಪಸ್ಸು ಹೋದರು)